# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್. ರಸ್ತೆ, ತುಮಕೂರು – 572 103

ದೂರವಾಣಿ : 0816-2254546 0816-2255596, 0816-2255597 ಫ್ಯಾಕ್ಸ್ : 0816-2270719

ಸಂಖ್ಯೆ: ತುವಿ:ಶೈ.ವಿ:2023-24:/3225

ದಿನಾಂಕ:01.12.2023

## ಸುತ್ತೋಲೆ

ವಿಷಯ:- ಸ್ನಾತಕೋತ್ತರ ವಿಭಾಗಗಳ ವಿದ್ಯಾರ್ಥಿಗಳಿಗೆ ಪ್ರವೇಶಾತಿ ದಿನಾಂಕವನ್ನು ವಿಸ್ತರಿಸುವ ಬಗ್ಗೆ

ಉಲ್ಲೇಖ:- 1. ವಿ.ವಿ. ಸುತ್ತೋಲೆ ಸಂಖ್ಯೆ:ತುವಿ: ಶೈವಿ:2023-24/3118 ದಿನಾಂಕ:21.11.2023

2. ಪ್ರವೇಶಾತಿ ದಿನಾಂಕವನ್ನು ವಿಸ್ತರಿಸುವಂತೆ 07 ವಿದ್ಯಾರ್ಥಿಗಳು ಮತ್ತು ಸ್ನಾತಕೋತ್ತರ ಸಂಯೋಜಿತ ಕಾಲೇಜಿನ 06 ಸಿಬ್ಬಂದಿಗಳ ಮನವಿಗಳ ಸ್ವೀಕೃತಿ ದಿನಾಂಕ:27.11.2023

3. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:01.12.2023

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2023-24ನೇ ಶೈಕ್ಷಣಿಕ ಸಾಲಿನ ಸ್ನಾತಕೋತ್ತರ ಪ್ರವೇಶಾತಿಯು UUCMS ಮುಖಾಂತರ ನಡೆಸಲಾಗಿದ್ದು, ಉಲ್ಲೇಖ(01)ರ ಸುತ್ತೋಲೆಯಲ್ಲಿ ದಿನಾಂಕ:24.11.2023ರವರೆಗೆ ಪ್ರವೇಶಾತಿ ದಿನಾಂಕವನ್ನು ವಿಸ್ತರಿಸಲಾಗಿರುತ್ತದೆ. ಉಲ್ಲೇಖ (02)ರಲ್ಲಿನ ಮನವಿಗಳನ್ನು ಪರಿಗಣಿಸಲಾಗಿದ್ದು, ಉಲ್ಲೇಖ (03)ರಲ್ಲಿನ ಮಾನ್ಯ ಕುಲಪತಿಯವರ ಅನುಮೋದನೆ ಮೇರೆಗೆ ವಿಭಾಗಗಳಲ್ಲಿ ಹಾಗೂ ಕಾಲೇಜುಗಳಲ್ಲಿ ಸೀಟುಗಳು ಲಭ್ಯವಿದ್ದಲ್ಲಿ ಈಗಾಗಲೇ ಅರ್ಜಿ ಸಲ್ಲಿಸಿ ಮೆರಿಟ್ ಲಿಸ್ಟ್‌ನಲ್ಲಿರುವ ವಿದ್ಯಾರ್ಥಿಗಳಿಗೆ ಆದ್ಯತೆ ನೀಡಿ, ಅಂತಹ ವಿದ್ಯಾರ್ಥಿಗಳು ಲಭ್ಯವಿಲ್ಲದೇ ಇದ್ದಲ್ಲಿ ಹೊಸದಾಗಿ ಅರ್ಜಿ ಸಲ್ಲಿಸಲು ಅವಕಾಶ ನೀಡಿ ಪ್ರವೇಶ ಶುಲ್ಕ ಪಾವತಿಯು ಸೇರಿದಂತೆ **ದಿನಾಂಕ:04.12.2023ರ** ಒಳಗೆ ನಿಯಮಾನುಸಾರ ಪ್ರವೇಶಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ತಿಳಿಸಿದೆ.

ಅದರಂತೆ, ದ್ವಿತೀಯ ವರ್ಷದ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ರೂ. 1,000/-ಗಳ ದಂಡ ಶುಲ್ಕದೊಂದಿಗೆ ಪ್ರವೇಶ ಶುಲ್ಕ ಪಾವತಿಸಿಕೊಳ್ಳಲು ಕೊನೆಯ ದಿನಾಂಕ:24.11.2023ರವರೆಗೆ ವಿಸ್ತರಿಸಲಾಗಿದ್ದು, ಮನವಿಯನ್ನು ಪರಿಗಣಿಸಿ ಸದರಿ ದಂಡ ಶುಲ್ಕದೊಂದಿಗೆ ಪ್ರವೇಶ ಶುಲ್ಕ ಪಾವತಿಸಿಕೊಳ್ಳಲು ಕೊನೆಯ **ದಿನಾಂಕ:04.12.2023** ಆಗಿದ್ದು, ಅದರಂತೆ ಕ್ರಮವಹಿಸಲು ಈ ಮೂಲಕ ತಿಳಿಸಿದೆ.

ಮುಂದುವರೆದು, ಈ ಹಿಂದಿನ ಶೈಕ್ಷಣಿಕ ಸಾಲಿನಲ್ಲಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುತ್ತಿದ್ದಂತೆಯೇ ನಿಗದಿತ **ನಮೂನೆಯಲ್ಲಿ 2023-24ನೇ ಶೈಕ್ಷಣಿಕ ಸಾಲಿನ ಪ್ರಥಮ ಮತ್ತು ದ್ವಿತೀಯ ವರ್ಷದ ವಿದ್ಯಾರ್ಥಿಗಳ ಪ್ರವೇಶಾತಿ ಪಟ್ಟಿಯನ್ನು ದಿನಾಂಕ:10.12.2023ರ ಒಳಗೆ ಸಲ್ಲಿಸುವಂತೆ ತಿಳಿಸಿದೆ.**

ವಿದ್ಯಾರ್ಥಿಗಳ ವಿದ್ಯಾರ್ಥಿ ವೇತನ ಹಾಗೂ ಇತರೆ ಸೌಲಭ್ಯಗಳಿಗಾಗಿ ಪ್ರಥಮ ವರ್ಷದ ವಿದ್ಯಾರ್ಥಿಗಳ ಮೂಲ ದಾಖಲೆಗಳನ್ನು ಪರಿಶೀಲನೆಗೆ ಮುದ್ದಾಂ ಸಲ್ಲಿಸಿ, ವಿದ್ಯಾರ್ಥಿಗಳ ಪ್ರವೇಶಾನುಮೋದನೆಯನ್ನು ಪಡೆಯುವಂತೆ ಈ ಮೂಲಕ ತಿಳಿಸಿದೆ.

ಆದೇಶದ ಮೇರೆಗೆ,

Mangalagowri M

ಉಪಕುಲಸಚಿವರು

ಉಪಕುಲ ಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾಲಯ
ತುಮಕೂರು

ಗೆ,

1. ಅಧ್ಯಕ್ಷರು / ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ ಮತ್ತು ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಸಂಯೋಜಕರು, ಶಿರಾ ಸ್ನಾತಕೋತ್ತರ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ಭುವನಹಳ್ಳಿ, ಶಿರಾ
4. ಸಂಯೋಜಕರು, ಸ್ನಾತಕೋತ್ತರ ಅಧ್ಯಯನ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ತಿಪಟೂರು

ಪ್ರತಿಗಳು:

1. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಇಂದೇ ಪ್ರಕಟಿಸುವುದು.
4. ಕಚೇರಿ ಪ್ರತಿ.